O.S.No.118/2022
PW -1

ದಿನಾಂಕ 16/01/2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯ್ತು

ಮುಖ್ಯ ವಿಚಾರಣೆ :- ಶ್ರೀ ಎಸ್.ಆರ್.ಆರ್. ವಾದಿ ಪರ ವಕೀಲರಿಂದ

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ಸತ್ಯವಾಗಿದೆ, ಹಾಗೂ ಸದರಿ ಪ್ರಮಾಣ ಪತ್ರಕ್ಕೆ ನಾನೇ ತಿಳಿದು ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಈ ದಿನ ನೋಟರಿ ರವರ ಮುಂದಿನ ವಂಶವೃಕ್ಷದ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಿ.28/04/2000 ರ ಪಾಲು ವಿಭಾಗ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಎಂ.ಆರ್ ಸಂಖ್ಯೆ-2/1996-97 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಚುಂಚೇನಹಳ್ಳಿ ಗ್ರಾಮದ ಸರ್ವೆ ನಂ-16/3, 23/1, 24/1, 46/6, 47/1 ಇವುಗಳ ಒಟ್ಟು 5 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 4 ರಿಂದ ನಿಪಿ-8 ಎಂದು ಗುರುತಿಸಲಾಯಿತು.

ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ಪರಿಗಣಿಸಿ ದಾವೆಯನ್ನು ಡಿಕ್ರಿಗೊಳಿಸಬೇಕಾಗಿ ಕೋರುತ್ತೇನೆ.

( ಪಾಟೀ ಸವಾಲುಃ- ಪ್ರತಿವಾದಿಗಳು ಏಕತರ್ಫಿ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)

(ತೆ ನ್ಯಾ ನ ಉ ಲೇ ಬೆ ಮಾ )

ಓ ಹೇ ಕೇ ಸ ಇ ಎ ಒ

( ರಘುನಾಥ ಗೌಡ ಕೆ.ಟಿ. )
ಪ್ರಧಾನ ಸಿವಿಲ್ ಜಡ್ಜ್, ಮಧುಗಿರಿ